## ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿಬ್ಬಂದಿ.ಶಾ./ಕೇ.ಮಾ.ಸಂ.ಅ.ಪ.ವಿ.ವೇ.2014/2012-13

ನಿರ್ದೇಶಕರು ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: 09-10-2014.

## ಪ್ರಕಟಣೆ

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ಉನ್ನತ ಶಿಕ್ಷಣ ಇಲಾಖೆ, ನವದೆಹಲಿ ಇವರ "Central Sector Scheme Scholarship For Colleges and University Students"ಗೆ ದ್ವಿತೀಯ ಪಿಯುಸಿ 2014ರ ಪರೀಕ್ಷೆಯಲ್ಲಿ ವಿವಿಧ ಕ್ಯಾಟಗರಿ, ಸಂಯೋಜನೆ ಮತ್ತು ಲಿಂಗವಾರು ಒಟ್ಟು 600 ಅಂಕಗಳಿಗೆ ನಿಗಧಿಪಡಿಸಿರುವ cutoff ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಈ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಹಾಕಲು ಅರ್ಹರಾಗಿರುತ್ತಾರೆ.

### 600 ಅಂಕಗಳಿಗೆ ನಿಗಧಿಪಡಿಸಿರುವ (Cut off marks) ಅಂಕಗಳು:
### (Cutoff marks fixed for Submission of Application only)

| Category | Science | | Commerce | | Arts | |
|---|---|---|---|---|---|---|
| | Boys | Girls | Boys | Girls | Boys | Girls |
| GM | 556 | 557 | 530 | 551 | 506 | 517 |
| OBC | 554 | 555 | 529 | 549 | 505 | 516 |
| SC | 484 | 479 | 489 | 503 | 495 | 491 |
| ST | 471 | 458 | 473 | 490 | 494 | 491 |

ಈ ಮೇಲಿನಂತೆ ಅಂಕಗಳನ್ನು ಪಡೆದಿರುವ ಅರ್ಹ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ತುಂಬಿದ ಅರ್ಜಿಗಳನ್ನು ಸಲ್ಲಿಸಲು **ದಿನಾಂಕ:07-10-2014** ಕೊನೆಯ ದಿನಾಂಕವೆಂದು ಮತ್ತು ಪ್ರಾಂಶುಪಾಲರುಗಳು ತಮ್ಮ ಕಾಲೇಜಿಗೆ ಬಂದಿರುವ ಅರ್ಜಿಗಳನ್ನು ಇಲಾಖೆಗೆ ಸಲ್ಲಿಸಲು **ದಿನಾಂಕ: 10-10-2014** ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು. ಅನೇಕ ಅರ್ಹ ವಿದ್ಯಾರ್ಥಿಗಳು ಪ್ರಚಾರದ ಕೊರತೆಯಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೆ ಇರುವುದು ಕಂಡು ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಅಗತ್ಯ ಸಂಖ್ಯೆಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು **ದಿನಾಂಕ: 25-10-2014ರವರೆಗೆ** ವಿಸ್ತರಿಸಲಾಗಿದೆ. ಹಾಗೂ ಕಾಲೇಜಿನ ಪ್ರಾಂಶುಪಾಲರುಗಳು ಇಲಾಖೆಗೆ ಕ್ರೋಢೀಕೃತ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ:27-10-2014ರವರೆಗೆ ವಿಸ್ತರಿಸಲಾಗಿದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ **Website no.:http://pue.kar.nic.in =» Scholarship =» MHRD Scholarship =» MHRD Scholarship 2014-Fresh batch**ನಿಂದ ಅರ್ಜಿಯನ್ನು / ಮಾಹಿತಿಯನ್ನು ಪಡೆದುಕೊಳ್ಳಬಹುದು.

Kadbole
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

# ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿಬ್ಬಂದಿ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2014/2012-13

ನಿರ್ದೇಶಕರು ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: 09-10-2014.

ಎಲ್ಲಾ ಪ್ರಾಂಶುಪಾಲರು,
ತಾಂತ್ರಿಕ ಮಹಾವಿದ್ಯಾಲಯ/ವೈದ್ಯಕೀಯ ಮಹಾವಿದ್ಯಾಲಯ/
ದಂತ ಮಹಾವಿದ್ಯಾಲಯ/ಆಯುರ್ವೇದ ಮಹಾವಿದ್ಯಾಲಯ.

ಮಾನ್ಯರೇ,

ವಿಷಯ: 2014ನೇ ಸಾಲಿನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸಿರುವ ಕುರಿತು.

*********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ನಿಮಗೆ ದಿನಾಂಕ:15-09-2014ರಂದು ಪತ್ರ ಬರೆಯಲಾಗಿತ್ತು, ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿಗಳನ್ನು ನಿಮಗೆ ಸಲ್ಲಿಸಲು *ದಿನಾಂಕ:07-10-2014* ಕೊನೆಯ ದಿನಾಂಕವೆಂದು ಮತ್ತು ಪ್ರಾಂಶುಪಾಲರುಗಳು ತಮ್ಮ ಕಾಲೇಜಿಗೆ ಬಂದಿರುವ ಅರ್ಜಿಗಳನ್ನು ಇಲಾಖೆಗೆ ಸಲ್ಲಿಸಲು ದಿನಾಂಕ:10-10-2014 ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು, ಅನೇಕ ಅರ್ಹ ವಿದ್ಯಾರ್ಥಿಗಳು ಪ್ರಚಾರದ ಕೊರತೆಯಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೆ ಇರುವುದು ಕಂಡು ಬಂದಿದೆ.

ಈ ಹಿನ್ನೆಲೆಯಲ್ಲಿ ಅರ್ಹ ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ***ದಿನಾಂಕ:25-10-2014ರವರೆಗೆ*** ವಿಸ್ತರಿಸಲಾಗಿದೆ. ಕಾಲೇಜಿನ ಪ್ರಾಂಶುಪಾಲರುಗಳು ಇಲಾಖೆಗೆ ಕ್ರೋಢೀಕೃತ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವನ್ನು **ದಿನಾಂಕ:27-10-2014ರವರೆಗೆ** ವಿಸ್ತರಿಸಲಾಗಿದೆ.

ಈ ಬಗ್ಗೆ ನಿಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಈ ವಿಷಯ ತಲುಪುವಂತೆ ಹೆಚ್ಚಿನ ಪ್ರಚಾರ ನೀಡಿ ಅರ್ಹ ವಿದ್ಯಾರ್ಥಿಗಳು ಅವಕಾಶ ವಂಚಿತರಾಗದಂತೆ ನೋಡಿಕೊಳ್ಳಲು ಕೋರಿದೆ. ಈ ಅರ್ಜಿ ನಮೂನೆಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಹಾಕಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯ **Website no.:http://pue.kar.nic.in =» Scholarship =» MHRD Scholarship =» MHRD Scholarship 2014-Fresh batch** ನಿಂದ ಅರ್ಜಿಯನ್ನು download ಮಾಡಿಕೊಳ್ಳಬಹುದು / ಮಾಹಿತಿಯನ್ನು ಪಡೆದುಕೊಳ್ಳಬಹುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

Godbole

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.